ದೇವಸ್ಥಾನದ ಮುಂಭಾಗದಲ್ಲಿ ವಾಹನ ನಿಲುಗಡೆಗೆ ನಿಷೇಧ.

2275(2742)

ಶ್ರೀ ರಾಮಲಿಂಗಾರೆಡ್ಡಿ (ಜಯನಗರ): ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನ ಜಯನಗರದ 9ನೇ ಬ್ಲಾಕ್‌ನಲ್ಲಿರುವ ಪ್ರಸನ್ನ ಆಂಜನೇಯಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ವಾಹನಗಳ ನಿಲುಗಡೆಯಿಂದಾಗಿ ಜನರು ಓಡಾಡುವುದಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ದೇವಸ್ಥಾನದ ಹಿಂಭಾಗದಲ್ಲಿರುವ ವಿಶಾಲವಾದ ರಸ್ತೆಯಲ್ಲಿ ವಾಹನಗಳ ನಿಲುಗಡೆಗೆ ಅವಕಾಶ ಮಾಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು):

ಅ) ಹೌದು.

ಆ) ಪ್ರಸನ್ನ ಆಂಜನೇಯ ಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ವಾಹನಗಳ ನಿಲುಗಡೆಯಿಂದ ಜನರ ಓಡಾಟಕ್ಕೆ ಆಗುತ್ತಿರುವ ತೊಂದರೆಯನ್ನು ತಪ್ಪಿಸಲು ದೇವಸ್ಥಾನದ ಮುಂಭಾಗದಲ್ಲಿ ವಾಹನಗಳ ನಿಲುಗಡೆಯನ್ನು ನಿಷೇಧಿಸಿ ಫಲಕಗಳನ್ನು ಅಳವಡಿಸಿ ಸ್ವಲ್ಪ ಜಾಗ ಬಿಟ್ಟು ಮುಂದೆ ವಾಹನಗಳನ್ನು ನಿಲ್ಲಿಸುವಂತೆ ಕ್ರಮಕೈಗೊಳ್ಳಲಾಗಿದೆ.

ಪ್ರಸನ್ನ ಆಂಜನೇಯಸ್ವಾಮಿ ದೇವಸ್ಥಾನದ ಹಿಂಬಾಗದಲ್ಲಿ ಖಾಲಿ ಜಾಗವಿದ್ದು, ಆ ಸ್ಥಳದಲ್ಲಿ ವಾಹನಗಳ ನಿಲುಗಡೆಯನ್ನು ವ್ಯವಸ್ಥೆಗೊಳಿಸಲು ಸದರಿ ಸ್ಥಳವನ್ನು ಸ್ವಚ್ಚಗೊಳಿಸಿ ಕೊಡಲು ಬೆಂಗಳೂರು ಮಹಾನಗರ ಪಾಲಿಕೆಯಿಂದ ಕ್ರಮ ಜರುಗಿಸಿ, ಶೀಘ್ರದಲ್ಲಿ ಇದನ್ನು ಕಾರ್ಯಗತಗೊಳಿಸಲಾಗುವುದು. ಸದರಿ ಸ್ಥಳದಲ್ಲಿ ವಾಹನಗಳ ನಿಲುಗಡೆಗೆ ವ್ಯವಸ್ಥೆ ಮಾಡಿ ಜನರು ಓಡಾಡುವುದಕ್ಕೆ ಅನುವು ಮಾಡಿಕೊಡಲಾಗುವುದು.

ಬೆಂಗಳೂರಿನ ಯಡಿಯೂರು ಕೆರೆಯನ್ನು ಶುದ್ಧೀಕರಿಸಿ ಪ್ರವಾಸಿ ಕೇಂದ್ರವನ್ನು ಮಾಡುವ ಬಗ್ಗೆ.

2276(2743)

ಶ್ರೀ ರಾಮಲಿಂಗಾರೆಡ್ಡಿ (ಜಯನಗರ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ

ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನ ಯಡಿಯೂರು ಕೆರೆಯನ್ನು ಶುದ್ಧೀಕರಿಸಿ ಇದನ್ನು ಪ್ರವಾಸಿ ಕೇಂದ್ರವನ್ನಾಗಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಎಸ್.ಎಂ.ಕೃಷ್ಣ (ಮುಖ್ಯಮಂತ್ರಿಗಳು):

ಅ) 1) ಯಡಿಯೂರು ಕೆರೆಯ ಸುತ್ತಾ ಕಾಂಪೌಂಡ್ ಗೋಡೆ ನಿರ್ವಹಣೆ.

2) ಕೊಳಚೆ ನೀರು ಹರಿದು ಹೋಗಲು ಚರಂಡಿ ನಿರ್ಮಾಣದ ಕೆಲಸ.

3) ಕಾವಲುಗಾರನ ವಸತಿ ಗೃಹ ನಿರ್ಮಾಣ. ಇದಕ್ಕೆ 35.00 ಲಕ್ಷ ರೂ.ಗಳು ಮಂಜೂರಾಗಿದ್ದು, ಈ ಸಾಲಿನಲ್ಲಿ ಕೆಲಸವನ್ನು ಕೈಗೆತ್ತಿಕೊಳ್ಳಲಾಗುವುದು.

4) ಅಲ್ಲದೆ, ಕೆರೆಯ ಸುತ್ತಮುತ್ತ ಉದ್ಯಾನವನ್ನು ಅಭಿವೃದ್ಧಿಪಡಿಸುವ ಸಲುವಾಗಿ ಯೋಜನೆಯನ್ನು ರೂಪಿಸಿದ್ದು, ಇದನ್ನು ಈ ಸಾಲಿನಲ್ಲಿ ಕೈಗೊಳ್ಳಲಾಗುವುದು. ಹಾಗೂ

5) ಕೆರೆಯನ್ನು ಅಭಿವೃದ್ಧಿಪಡಿಸಲು ಪ್ರವಾಸೋದ್ಯಮ ಇಲಾಖೆಯ ಸಹಕಾರವನ್ನು ಸಹ ಕೇಳಲಾಗಿದೆ.

ರಾಜ್ಯದಲ್ಲಿರುವ ಬಹುರಾಷ್ಟ್ರೀಯ ಕಂಪನಿಗಳಲ್ಲಿ ಕನ್ನಡಿಗರಿಗೆ ಉದ್ಯೋಗ ಅವಕಾಶ ಕಲ್ಪಿಸುವ ಬಗ್ಗೆ.

2277(3024)

ಶ್ರೀ ರಾಮಲಿಂಗಾ ರೆಡ್ಡಿ (ಜಯನಗರ): ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಂಪನ್ಮೂಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಬಹುರಾಷ್ಟ್ರೀಯ ಕಂಪನಿಗಳಲ್ಲಿ ಕನ್ನಡಿಗರಿಗೆ ಉದ್ಯೋಗ ಅವಕಾಶ ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು?

ಶ್ರೀ ಆರ್.ವಿ.ದೇಶಪಾಂಡೆ (ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಂಪನ್ಮೂಲ ಅಭಿವೃದ್ಧಿ ಸಚಿವರು):

ಅ) ಡಾ: ಸರೋಜಿನಿ ಮಹಿಷಿ ಸಮಿತಿಯ ವರದಿ ಪ್ರಕಾರ ರಾಜ್ಯದಲ್ಲಿರುವ 50